**ಅತಿ ಜರೂರು**

**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ 09 ಎಸ್‌ಸಿಹೆಚ್(1) 2019-20

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು - 560 001.
ದಿನಾಂಕ: 10-02-2020.

**-:: ಸುತ್ತೋಲೆ ::-**

**ವಿಷಯ :** **2019-20ನೇ** ಸಾಲಿಗೆ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಆನ್‌ಲೈನ್ ಮುಖಾಂತರ ಈ ಇಲಾಖೆಗೆ ಸಲ್ಲಿಸಿರುವ ಅರ್ಜಿ ವಿವರಗಳನ್ನು ಕಳುಹಿಸಿಕೊಡುವ ಬಗ್ಗೆ.

**ಉಲ್ಲೇಖ :** ಇದೇ ಸಮ ಸಂಖ್ಯೆಯ ಸುತ್ತೋಲೆ ಪತ್ರದ ದಿನಾಂಕ: 02-11-2019 &02-12-2019.

-ooooooo-

2019-20ನೇ ಸಾಲಿನಿಂದ ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷದಿಂದ ರೂ.10.00 ಲಕ್ಷ ಒಳಗಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಹಾಗೂ ರಕ್ಷಣಾದಳದ ಸಿಬ್ಬಂದಿಯ ಮಕ್ಕಳಿಗೆ/ಆಶ್ರಿತರಿಗೆ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು, ಇ-ಆಡಳಿತ ಇಲಾಖೆಯು ಅಭಿವೃದ್ಧಿ ಪಡಿಸಿರುವ ಮೆಟ್ರಿಕ್ ನಂತರದ ರಾಜ್ಯ ವಿದ್ಯಾರ್ಥಿವೇತನ (State Scholarship Portal-Post Matric) ಪೋರ್ಟಲ್‌ನಲ್ಲಿ http://ssp.postmatric.karnataka.gov.in ದಿನಾಂಕ: 01-11-2019 ರಿಂದ ಅರ್ಜಿಗಳನ್ನು ಸಲ್ಲಿಸಲು ಹಾಗೂ ವಿದ್ಯಾರ್ಥಿಗಳು ಅಪ್‌ಲೋಡ್ ಮಾಡಿರುವ ದಾಖಲೆಗಳನ್ನು ಸದರಿ ಸಂಸ್ಥೆಯ ಇ-ದೃಢೀಕರಣ ಅಧಿಕಾರಿಗಳು ದೃಢೀಕರಿಸುವ ಬಗ್ಗೆ ಹಾಗೂ ಇತರೇ ಅವಶ್ಯ ಮಾಹಿತಿಗಳನ್ನು ಉಲ್ಲೇಖಿತ ಪತ್ರಗಳಲ್ಲಿ ತಿಳಿಸಲಾಗಿರುತ್ತದೆ.

ಅದರಂತೆ, ಮೇಲೆ ತಿಳಿಸಿರುವ ಯೋಜನೆಗಳಲ್ಲಿ ಶುಲ್ಕ ಮರುಪಾವತಿ/ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಮುಖಾಂತರ ಸಲ್ಲಿಸಿರುವ ಅರ್ಜಿಗಳನ್ನು ಪರಿಶೀಲಿಸಲಾಗಿದ್ದು, ಹಲವು ವಿದ್ಯಾರ್ಥಿಗಳು ಸಲ್ಲಿಸಬೇಕಾಗಿರುವ ಕೆಲವು ದಾಖಲೆಗಳನ್ನು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಿರುವುದಿಲ್ಲ. ಆದ್ದರಿಂದ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ/ಶುಲ್ಕ ಮರುಪಾವತಿ ಮಂಜೂರು ಮಾಡಲು ತೊಂದರೆಯಾಗಿರುತ್ತದೆ, ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಶುಲ್ಕ ಮರುಪಾವತಿ/ವಿದ್ಯಾರ್ಥಿವೇತನಕ್ಕೆ ಅರ್ಜಿಸಲ್ಲಿಸಿರುವ ತಮ್ಮ ಸಂಸ್ಥೆಯ ವಿದ್ಯಾರ್ಥಿಗಳ ಈ ಕೆಳಗೆ ತಿಳಿಸಿರುವ ದಾಖಲೆಗಳನ್ನು ದೃಢೀಕರಿಸಿ ಮತ್ತು ವಿವರಗಳು **ದಿನಾಂಕ: 15-02-2020ರ** ಒಳಗೆ ಅತಿ ಜರೂರಾಗಿ ಈ ಕಛೇರಿಗೆ ಕಳುಹಿಸಿಕೊಡಲು ಈ ಮೂಲಕ ತಿಳಿಯಪಡಿಸಿದೆ.

1. ವಿದ್ಯಾರ್ಥಿಯು ಆನ್‌ಲೈನ್‌ನಲ್ಲಿ ಸಲ್ಲಿಸಿರುವ ಅರ್ಜಿಯ ಸ್ವೀಕೃತಿ. (Acknowledgement)
2. ಹಂಚಿಕೆ ಪ್ರಮಾಣ ಪತ್ರ (Engineering - CET/Comed-k Admission Order & Diploma - Online Interactive Admission Order)
3. ವಿದ್ಯಾರ್ಥಿಯು ಸಂಸ್ಥೆಗೆ ಪಾವತಿಸಿರುವ ಶುಲ್ಕಗಳ ರಸೀದಿ ಮತ್ತು ಹಿಂದಿನ ವರ್ಷದ ನಕಲು ಅಂಕಪಟ್ಟಿಗಳು.
4. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಯ ಜಾತಿ ಪ್ರಮಾಣ ಪತ್ರ, ಪೋಷಕರ ಕುಟುಂಬ ಆದಾಯ ಪ್ರಮಾಣ ಪತ್ರ ಮತ್ತು ಪೋಷಕರ ವೇತನ ಪತ್ರ. (SC/ST Parents Salary Slip)
5. ರಕ್ಷಣಾದಳದ ಸಿಬ್ಬಂದಿಯ ಸೇವೆ ಪ್ರಮಾಣ ಪತ್ರ. (Kin of Defense - Service Certificate)

ನಿರ್ದೇಶಕರು

***ಇವರಿಗೆ :-***

1. **ಪ್ರಾಂಶುಪಾಲರು,** ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳು ಇಥರ ಮುಂದಿನ ಕ್ರಮಕ್ಕಾಗಿ.
2. **ಸಂಯೋಜನಾಧಿಕಾರಿಯವರು,** ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು. (ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು).